ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 741
ಸದಸ್ಯರ ಹೆಸರು : ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ
ಉತ್ತರಿಸುವ ಸಚಿವರು : ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು
ಉತ್ತರಿಸುವ ದಿನಾಂಕ : 10.03.2020.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಲಕ್ಷಾಂತರ ಅಡಿಕೆ ಬೆಳೆಗಾರರು ಬಹುಕಾಲದಿಂದ ನಿರೀಕ್ಷಿಸುತ್ತಿರುವ ಅಡಿಕೆ ಮಂಡಳಿ ಸ್ಥಾಪನೆ ಮಾಡುವ ಕುರಿತು ಸರ್ಕಾರ ಯಾವ ಕ್ರಮ ಕೈಗೊಂಡಿದೆ; | ರಾಷ್ಟ್ರ ಮಟ್ಟದ ಅಡಿಕೆ ಮಂಡಳಿ ಸ್ಥಾಪಿಸಲು ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿದೆ. |
| ಆ) | ಅಡಿಕೆ ಪವಿತ್ರ ಎನ್ನುವ ಭಾವನೆ ಜನತೆಯಲ್ಲಿದ್ದರೂ, ಅಡಿಕೆ ಆರೋಗ್ಯಕ್ಕೆ ಹಾನಿಕರ ಎಂಬ ಅವೈಜ್ಞಾನಿಕ ವರದಿಯನ್ನು ಕೈಬಿಡುವ ನಿಟ್ಟಿನಲ್ಲಿ ಸರ್ಕಾರದ ಕ್ರಮವೇನು; | ಈ ನಿಟ್ಟಿನಲ್ಲಿ ಅಡಿಕೆ ಬೆಳೆಗಾರರ ಹಿತ ದೃಷ್ಟಿಯನ್ನು ಕಾಪಾಡಲು ರಾಜ್ಯ ಸರ್ಕಾರದ ವತಿಯಿಂದ ಅಡಿಕೆ ಕಾರ್ಯ ಪಡೆಯನ್ನು (Areca Task Force) ರಚಿಸಲಾಗಿದೆ, ಅಡಿಕೆ ಆರೋಗ್ಯಕ್ಕೆ ಹಾನಿಕರ ಎಂಬ ಅವೈಜ್ಞಾನಿಕ ವರದಿಯನ್ನು ಕೈಬಿಡುವ ಸಂಬಂಧ ವೈದ್ಯಕೀಯ ವರದಿಗಳನ್ನು ಪಡೆಯಲು ಕ್ರಮ ಕೈಗೊಳ್ಳಲಾಗುತ್ತಿದೆ. |
| ಇ) | ಅಡಿಕೆಗೆ ಬರುವ ಕೊಳೆ, ಹಳದಿ ಎಲೆ ರೋಗಗಳ ನಿಯಂತ್ರಣಕ್ಕೆ ಸರ್ಕಾರ ಯಾವ ರೀತಿ ಕ್ರಮ ಕೈಗೊಂಡಿದೆ; | **ಅಡಿಕೆಗೆ ಬರುವ ಕೊಳೆ, ಹಳದಿ ಎಲೆ ರೋಗಗಳ ನಿಯಂತ್ರಣಕ್ಕೆ ಕೆಳಕಾಣಿಸಿದ ಕ್ರಮಗಳನ್ನು ಕೈಗೊಳ್ಳಲಾಗಿದೆ.**<br>**1.** ಕೊಳೆರೋಗ ನಿಯಂತ್ರಣ<br>• ರೋಗ ಹರಡುವ ಶಿಲೀಂಧ್ರದ ನಿಯಂತ್ರಣಕ್ಕೆ ಬೋರ್ಡೋ ದ್ರಾವಣ ತಯಾರಿಸಲು ಅಗತ್ಯವಿರುವ ಮೈಲು ತುತ್ತಾ ಹಾಗೂ ಸುಣ್ಣ ಖರೀದಿಸಲು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೈತರಿಗೆ ಶೇ.90 ರಷ್ಟು ಮತ್ತು ಸಾಮಾನ್ಯ ವರ್ಗದವರಿಗೆ ಶೇ. 75 ರಷ್ಟು ಸಹಾಯ ಧನವನ್ನು ನೀಡಲಾಗುತ್ತಿದೆ.<br>• ರೋಗ ನಿಯಂತ್ರಣಕ್ಕೆ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ರೈತರಿಗೆ ತಾಂತ್ರಿಕ ಮಾಹಿತಿಯನ್ನು ಸಭೆಗಳು, ತರಬೇತಿಗಳು, ಪ್ರಾತ್ಯಕ್ಷತೆಗಳು ಹಾಗೂ ಕರಪತ್ರಗಳನ್ನು ಹಂಚುವ ಮೂಲಕ ಹೋಬಳಿ ಮಟ್ಟದಲ್ಲಿ ನೀಡಲಾಗುತ್ತಿದೆ.<br>• NDRF ಮಾರ್ಗಸೂಚಿಯನ್ವಯ |

| | | |
|---|---|---|
| | | ತೋಟಗಾರಿಕೆ ಬಹುವಾರ್ಷಿಕ ಬೆಳೆ ಹಾನಿಗೆ ಪ್ರತಿ ಹೆಕ್ಟೇರಗೆ ರೂ.18,000/-ನಂತೆ, ಪ್ರತಿ ಫಲಾನುಭವಿಗೆ ಗರಿಷ್ಠ 2 ಹೆಕ್ಟೇರ್ ವರೆಗೆ ಪರಿಹಾರ ಧನವನ್ನು ಒದಗಿಸಲು ಕಂದಾಯ ಇಲಾಖೆಯಿಂದ ಕ್ರಮ ವಹಿಸಲಾಗುತ್ತಿದೆ.<br>2. **ಅಡಿಕೆ ಹಳದಿ ಎಲೆ ರೋಗ**<br>• ಗಿಡಗಳ ರೋಗ ನಿರೋಧಕ ಶಕ್ತಿಯನ್ನು ವೃದ್ಧಿಸಲು ಹನಿ ನೀರಾವರಿ ಅಳವಡಿಕೆ, ಉತ್ತಮ ಬಸಿಕಾಲುವೆ ನಿರ್ಮಾಣ, ಪೌಷ್ಠಿಕಾಂಶಗಳ ಸರಬರಾಜು ಇತ್ಯಾದಿ ಉತ್ತಮ ಬೇಸಾಯ ಪದ್ಧತಿಗಳನ್ನು ಪ್ರಚಾರ ಮಾಡಲಾಗುತ್ತಿದೆ.<br>• ಅಡಿಕೆ ಹಳದಿ ಎಲೆ ರೋಗ ಬಾಧೆ ತೀವ್ರವಾಗಿರುವ ತೋಟಗಳಲ್ಲಿ ಬಾಧಿತ ಮರಗಳನ್ನು ತೆಗೆದು ಹಾಕಿ ಪರ್ಯಾಯ ಬೆಳೆಗಳಾದ ಬಾಳೆ, ಕಾಳುಮೆಣಸು, ಏಲಕ್ಕಿ, ಕೋಕೋ, ತೆಂಗು, ತಾಳೆ ಬೆಳೆ ಮತ್ತು ಕಾಫಿ ಬೆಳೆಗಳನ್ನು ಬೆಳೆಸಲು ರೈತರಿಗೆ ತಿಳುವಳಿಕೆ ನೀಡಲಾಗುತ್ತಿದೆ. |
| ಈ) | ಕಳ್ಳ ಸಾಗಾಣಿಕೆ ಮೂಲಕ ವಿದೇಶಿ ಅಡಿಕೆ ಮಾರುಕಟ್ಟೆ ಪ್ರವೇಶಿಸುವುದನ್ನು ತಡೆಯಲು ಸರ್ಕಾರದ ಕ್ರಮವೇನು; | ಕಳ್ಳ ಸಾಗಾಣಿಕೆ ಮೂಲಕ ವಿದೇಶಿ ಅಡಿಕೆ ಮಾರುಕಟ್ಟೆ ಪ್ರವೇಶಿಸುವುದನ್ನು ತಡೆಯಲು ಕೇಂದ್ರ ಸರ್ಕಾರವನ್ನು ಒತ್ತಾಯಿಸಲಾಗುವುದು. |
| ಉ) | ಅಡಿಕೆ ದರ ಸ್ಥಿರತೆ ಕಾಪಾಡಿಕೊಳ್ಳುವ ನಿಟ್ಟಿನಲ್ಲಿ ಸರ್ಕಾರದ ಕ್ರಮವೇನು? | ಅಡಿಕೆ ದರ ಸ್ಥಿರತೆ ಕಾಪಾಡಿಕೊಳ್ಳುವ ನಿಟ್ಟಿನಲ್ಲಿ ಬೆಲೆ ಕುಸಿತವಾದ ಸಂದರ್ಭದಲ್ಲಿ ಮಾರುಕಟ್ಟೆ ಮಧ್ಯಪ್ರವೇಶ ಬೆಲೆಯನ್ನು ಕೇಂದ್ರ ಸರ್ಕಾರದ ಮಾರ್ಗಸೂಚಿಗಳನ್ವಯ ನೀಡಲು ಕ್ರಮ ಕೈಗೊಳ್ಳಲಾಗುತ್ತಿದೆ. |

HORTI 82 HGM 2020

(ನಾರಾಯಣ ಗೌಡ)
ಪೌರಾಡಳಿತ, ತೋಟಗಾರಿಕೆ ಮತ್ತು ರೇಷ್ಮೆ ಸಚಿವರು